# ಹೆಬ್ಬಾರ್ ದಂಪತಿಗೆ ಸೋಂಕು ದೃಢ

ಯಲ್ಲಾಪುರ: ಕಾರ್ಮಿಕ ಮತ್ತು ಸಕ್ಕರೆ ಖಾತೆ ಹಾಗೂ ಉತ್ತರ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಮ ಹೆಬ್ಬಾರ್ ಹಾಗೂ ಅವರ ಧರ್ಮಪತ್ನಿ ವನಜಾಕ್ಷಿ ಹೆಬ್ಬಾರ್ ಅವರಿಗೆ ಕೋವಿಡ್ ಸೋಂಕು ದೃಢಪಟ್ಟಿದೆ.



ಇದನ್ನು ಸ್ವತಃ ಸಚಿವರೇ ಟ್ವೀಟ್ ಮಾಡಿ ಬಹಿರಂಗಪಡಿಸಿ ದ್ದಾರೆ. ಸೆ. 5ರಂದು ಸ್ವತಃ ಕೋವಿಡ್ ಪರೀಕ್ಷೆಗೆ ಅವರು ಒಳಗಾಗಿದ್ದು ಈ ಸಂದರ್ಭ ಸೋಂಕು ಇರುವುದು ದೃಢಪಟ್ಟಿದೆ.

ಸಚಿವ ಶಿವರಾಮ ಹೆಬ್ಬಾರ ಹಾಗೂ ಅವರ ಪತ್ನಿ ಯಲ್ಲಾಪುರ ಸರಕಾರಿ ಆಸ್ಪತ್ರೆಯಲ್ಲಿ ಕೋವಿಡ್ ಪರೀಕ್ಷೆಗೆ ಒಳಗಾಗಿದ್ದರು. ಅವರಿಗೆ ಯಾವುದೇ ರೋಗ ಲಕ್ಷಣ ಇದ್ದಿರಲಿಲ್ಲ, ಆದರೂ ಪರೀಕ್ಷೆಗೆ ಒಳಗಾದರು. ಸದ್ಯ ಸಚಿವರು ವೈದ್ಯರ ಸಲಹೆಯಂತೆ ಹೋಮ್ ಕ್ವಾರಂಟೈನ್ ಆಗಿದ್ದಾರೆ. ಹೆಬ್ಬಾರ್ ಅವರು ಧಾರವಾಡ, ಬೆಳಗಾವಿಯ ಪ್ರವಾಸ ಬಳಿಕ ಕೆಲ ದಿನಗಳಿಂದ ಬೆಂಗಳೂರಿನಲ್ಲಿದ್ದರು. ಶನಿವಾರ ಬೆಳಗ್ಗೆ ಯಲ್ಲಾಪುರಕ್ಕೆ ವಾಪಸ್ಸಾಗಿದ್ದರು.

ಕಳೆದ ಎರಡು ದಿನಗಳಿಂದ ತಮ್ಮ ಪ್ರಾಥಮಿಕ ಹಾಗೂ ದ್ವಿತೀಯ ಸಂಪರ್ಕಕ್ಕೆ ಬಂದವರು ಕೋವಿಡ್ ಪರೀಕ್ಷೆ ಮಾಡಿಸಿಕೊಳ್ಳುವಂತೆ ಸಚಿವರು ವಿನಂತಿಸಿದ್ದಾರೆ.